# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1712** |
| ಉತ್ತರಿಸಬೇಕಾದ ದಿನಾಂಕ | : | 18.03.2026 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಲಿಂಗಸುಗೂರು ವಿಧಾನಸಭಾ ಕ್ಷೇತ್ರಕ್ಕೆ ಸರ್ಕಾರದ ಆದೇಶ ಸಂಖ್ಯೆ:ವ ಇ 179 ಹೆಚ್‌ಎಹೆಚ್ 2024, ದಿನಾಂಕ:31.10.2024 (ಆದೇಶ 15) ರಲ್ಲಿ 1200 ಮನೆಗಳು ಮಂಜೂರಾಗಿದ್ದು, ಪ್ರಸ್ತುತ ಯಾವ ಹಂತದಲ್ಲಿದೆ ಒಂದು ವೇಳೆ ಮಂಜೂರಾದ ಮನೆಗಳನ್ನು ರದ್ದುಗೊಳಿಸಿದ್ದರೆ, ಯಾವ ಕಾರಣಕ್ಕಾಗಿ ರದ್ದುಗೊಳಿಸಲಾಗಿದೆ; ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು). | ರಾಯಚೂರು ಜಿಲ್ಲೆಯ ಲಿಂಗಸುಗೂರು ವಿಧಾನಸಭಾಕ್ಷೇತ್ರಕ್ಕೆ ಸರ್ಕಾರದ ಆದೇಶ ಸಂಖ್ಯೆ: ವಇ 179 ಹೆಚ್‌ಎಹೆಚ್ 2024, ದಿನಾಂಕ:31.10.2024 (ಆದೇಶ 15) ರಲ್ಲಿ ಬಸವ ವಸತಿ ಯೋಜನೆ ಹಾಗೂ ಡಾ॥ ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆ-ಗ್ರಾಮೀಣರಡಿ 1200 ಹೆಚ್ಚುವರಿ ಮನೆಗಳನ್ನು ಮಂಜೂರು ಮಾಡಿ ಆದೇಶಿಸಲಾಗಿತ್ತು.<br><br>ಸರ್ಕಾರದ ಆದೇಶ ಸಂಖ್ಯೆ: ವಇ 73 ಹೆಚ್‌ಎಹೆಚ್ 2024, ದಿನಾಂಕ: 04.12.2024ರಲ್ಲಿ 2024-25ನೇ ಸಾಲಿಗೆ ವಿವಿಧ ಆದೇಶಗಳಲ್ಲಿ ವಿವಿಧ ವಿಧಾನಸಭಾಕ್ಷೇತ್ರ/ಗ್ರಾಮ ಪಂಚಾಯತಿಗಳಿಗೆ ಮಂಜೂರಾದ ಒಟ್ಟು 5405 ಮನೆಗಳನ್ನು ಹಿಂಪಡೆದು ರದ್ದುಪಡಿಸಿದೆ. ಈ ರದ್ದಾದ ಮನೆಗಳಲ್ಲಿ ಲಿಂಗಸುಗೂರು ವಿಧಾನಸಭಾಕ್ಷೇತ್ರದ 1200 ಮನೆಗಳು ಸಹಾ ಸೇರಿರುತ್ತದೆ. |
| ಆ) | ರಾಯಚೂರು ಜಿಲ್ಲೆಯ ಲಿಂಗಸೂಗೂರು ವಿಧಾನಸಭಾ ಕ್ಷೇತ್ರಕ್ಕೆ 1200 ಮನೆಗಳು ರದ್ದಾದ ನಂತರ ಸದರಿ ಕ್ಷೇತ್ರದ ಬಡಜನರಿಗೆ ತುಂಬ ತೊಂದರೆಯಾಗುತ್ತಿರುವುದರಿಂದ ಮತ್ತೆ 600 ಮನೆಗಳನ್ನು ಮರು ಹಂಚಿಕೆ ಮಾಡುವ ಅಥವಾ ಹೆಚ್ಚುವರಿ ಮನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ; | ಲಿಂಗಸುಗೂರು ವಿಧಾನಸಭಾ ಕ್ಷೇತ್ರಕ್ಕೆ 600 ಮನೆಗಳನ್ನು ಮಂಜೂರು ಮಾಡಲು ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |

ಸಂಖ್ಯೆ:ವಇ 107 ಹೆಚ್‌ಎಎಂ 2026

(ಬಿ.ಝಡ್ ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು.